# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 652 |
| 2 | ಸದಸ್ಯರ ಹೆಸರು | : | ಶ್ರೀ ಲಹರ್ ಸಿಂಗ್ ಸಿರೋಯಾ |
| 3 | ಉತ್ತರಿಸುವ ದಿನಾಂಕ | : | 12-03-2020 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿರುವ ಬೀದಿ ನಾಯಿ ಕಡಿತದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ರೇಬಿಸ್ ಲಸಿಕೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪಾಲಿಕೆಯ ಎಲ್ಲಾ ರೆಫರಲ್ ಹೆರಿಗೆ ಆಸ್ಪತ್ರೆ ಮತ್ತು ಆರೋಗ್ಯ ಕೇಂದ್ರಗಳಲ್ಲಿ ರೇಬೀಸ್ ಲಸಿಕೆಗಳು ಲಭ್ಯವಿದ್ದು, ಯಾವುದೇ ಕೊರತೆ ಇರುವುದಿಲ್ಲ. |
| ಆ) | ನಿಗದಿತ ಪ್ರಮಾಣದಲ್ಲಿ ರೇಬೀಸ್ ಲಸಿಕೆಯನ್ನು ಆಸ್ಪತ್ರೆಗಳಿಗೆ ಸರಬರಾಜು ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು; | ನಿಗದಿತ ಪ್ರಮಾಣದಲ್ಲಿ ರೇಬೀಸ್ ಲಸಿಕೆಯನ್ನು ಆಸ್ಪತ್ರೆಗಳಿಗೆ ಇ-ಪ್ರಕ್ಯೂರ್‌ಮೆಂಟ್ ಮುಖಾಂತರ ಸರಬರಾಜು ಮಾಡಲಾಗುತ್ತಿದೆ. |
| ಇ) | ಕಳೆದ 03 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ದಾಖಲಾಗಿರುವ ಬೀದಿನಾಯಿ ಕಡಿತದ ಪ್ರಕರಣಗಳೆಷ್ಟು; | ಕಳೆದ 03 ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಬೀದಿನಾಯಿ ಕಡಿತದ ಪ್ರಮಾಣ ಈ ಕೆಳಕಂಡಂತಿದೆ.<br>**2017 ರಲ್ಲಿ -12291**<br>**2018 ರಲ್ಲಿ -3832**<br>**2019 ರಲ್ಲಿ -8799**<br>**2020 ರಲ್ಲಿ -768 (ಈ ತಹಲ್‌ವರಗೂ)** |
| ಈ) | ಬೀದಿನಾಯಿಗಳ ಜನನ ಪ್ರಮಾಣ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಬೀದಿನಾಯಿಗಳ ಜನನ ಪ್ರಮಾಣ ನಿಯಂತ್ರಿಸಲು ಎನ್.ಜಿ.ಓ ಸಂಸ್ಥೆಗಳಿಂದ ಹಾಗೂ ಸೇವಾದಾರರಿಂದ ಸಂತಾನಹರಣ ಶಸ್ತ್ರಚಿಕಿತ್ಸೆ (ABC) ನಡೆಸಲು ಕಾರ್ಯಕ್ರಮವನ್ನು ರೂಪಿಸಲಾಗಿರುತ್ತದೆ ಹಾಗೂ ಎಲ್ಲಾ ವಲಯಗಳಲ್ಲಿ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳ್ಳಲು ಕ್ರಮ ವಹಿಸಲಾಗಿರುತ್ತದೆ. |

**ಸಂಖ್ಯೆ: ನಅಇ 43 ಎಂಎನ್‌ವೈ 2020**

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ